सत्यमेव जयते

**" ELECTION URGENT "**

## ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ,
ನಂ. 8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

ವಿಷಯ: ನಗರ ಸ್ಥಳೀಯ ಸಂಸ್ಥೆಗಳ ಸಾರ್ವತ್ರಿಕ ಮತ್ತು ಉಪ ಚುನಾವಣೆ – 2021. ಮತದಾನದ ಅವಧಿಯನ್ನು 1 ಗಂಟೆ ವಿಸ್ತರಿಸಿರುವ ಬಗ್ಗೆ.

ಓದಲಾಗಿದೆ.
1. ಆಯೋಗದ ಆದೇಶ ಸಂಖ್ಯೆ: ರಾಚುಆ:45:ಇಯುಬಿ:2021 ದಿನಾಂಕ: 29.03.2021.
2. ಆಯೋಗದ ಆದೇಶ ಸಂಖ್ಯೆ: ರಾಚುಆ:41:ಇಯುಬಿ:2021 ದಿನಾಂಕ: 29.03.2021
3. ಆಯೋಗದ ಆದೇಶ ಸಂಖ್ಯೆ: ರಾಚುಆ:41:ಇಯುಬಿ:2020 ದಿನಾಂಕ: 29.03.2021

**ಪ್ರಸ್ತಾವನೆ:**

ರಾಜ್ಯ ಚುನಾವಣಾ ಆಯೋಗವು ಮೇಲೆ ಕ್ರ.ಸಂ. (1) ಮತ್ತು (2) ರಲ್ಲಿ ಓದಲಾದ ಆದೇಶಗಳಲ್ಲಿ ಒಟ್ಟು 10 ನಗರ ಸ್ಥಳೀಯ ಸಂಸ್ಥೆಗಳಿಗೆ ಸಾರ್ವತ್ರಿಕ ಚುನಾವಣೆ-ನಡೆಸಲು ವೇಳಾಪಟ್ಟಿಯನ್ನು ಹಾಗೂ ಕ್ರ.ಸಂ. (3) ರಲ್ಲಿ ಓದಲಾದ ಆದೇಶದಲ್ಲಿ 2 ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ ವಾರ್ಡುಗಳಿಗೆ ಉಪ ಚುನಾವಣೆ ನಡೆಸಲು ವೇಳಾ ಪಟ್ಟಿಯನ್ನು ಪ್ರಕಟಿಸಿ ಚುನಾವಣೆ ನಡೆಸಲು ಆದೇಶಿಸಿದೆ. ಸದರಿ ಚುನಾವಣಾ ವೇಳಾ ಪಟ್ಟಿಯಂತೆ ದಿನಾಂಕ 27.04.2021 ರಂದು ಮತದಾನ ನಡೆಯಲಿದೆ.

ರಾಜ್ಯದಲ್ಲಿ ಪ್ರಸ್ತುತ: ಮುಂದುವರಿದಿರುವ ಕೋವಿಡ್ ಸೋಂಕಿನ ಹಿನ್ನೆಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ಎಲ್ಲ ಕೋವಿಡ್ ಸುರಕ್ಷತಾ ಕ್ರಮಗಳೊಂದಿಗೆ ನಡೆಸುವುದು ಅವಶ್ಯಕ ವಾಗಿರುತ್ತದೆ. ಆಯೋಗವು ಚುನಾವಣೆ ನಡೆಯಲಿರುವ ಎಲ್ಲ ಮತಗಟ್ಟೆಗಳಿಗೆ ಕೋವಿಡ್ ಮುಂಜಾಗ್ರತಾ ಪರಿಕರಗಳನ್ನೊಳಗೊಂಡ ಕೋವಿಡ್ ಕಿಟ್ ಗಳನ್ನು ಒದಗಿಸಲಾಗಿರುತ್ತದೆ. ಆರೋಗ್ಯ ಇಲಾಖೆಯ ಸಹಕಾರದೊಂದಿಗೆ ಎಲ್ಲಾ ಮುಂಜಾಗ್ರತಾ ಕ್ರಮಗಳೊಂದಿಗೆ ಚುನಾವಣೆಯನ್ನು ನಡೆಸಬೇಕಾಗಿರುತ್ತದೆ. ಮತದಾರರ ಸುರಕ್ಷತೆಯ ದೃಷ್ಟಿಯಿಂದ ಹಾಗೂ ಕೋವಿಡ್ ಸೋಂಕಿತರೂ ಮತದಾನದ ಅವಕಾಶದಿಂದ ವಂಚಿತರಾಗದೆ ಅವರಿಗೂ ಮತದಾನ ಮಾಡಲು ಅವಕಾಶ ನೀಡುವ ದೃಷ್ಟಿಯಿಂದ ಮತದಾನವನ್ನು ಹೆಚ್ಚುವರಿ 1 ಗಂಟೆಗಳ ಕಾಲ ವಿಸ್ತರಿಸಲು ಆಯೋಗವು ನಿರ್ಧರಿಸಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸಾರ್ವತ್ರಿಕ ಚುನಾವಣೆ ನಡೆಯುತ್ತಿರುವ ನಗರ ಸ್ಥಳೀಯ ಸಂಸ್ಥೆಗಳ ಎಲ್ಲಾ ವಾರ್ಡುಗಳ ಹಾಗೂ ಉಪ ಚುನಾವಣೆ ನಡೆಯುತ್ತಿರುವ ನಗರ ಸ್ಥಳೀಯ ಸಂಸ್ಥೆಗಳ ಆಯಾ ವಾರ್ಡುಗಳ ಮತದಾನದ ಸಮಯಾವಧಿಯನ್ನು ಒಂದು ಗಂಟೆ ವಿಸ್ತರಿಸಿ ಆಯೋಗವು ಭಾರತ ಸಂವಿಧಾನದ ಅನುಚ್ಛೇದ 243-ಝಡ್ ಎ ರಡಿಯಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡಂತೆ ಆದೇಶಿಸಿದೆ.

### ಆದೇಶ ಸಂಖ್ಯೆ: ರಾಚುಆ:45:ಇಯುಬಿ:2021, ದಿನಾಂಕ: 26.04.2021.

ದಿನಾಂಕ 27.04.2021 ರಂದು ನಡೆಯಲಿರುವ 10 ನಗರ ಸ್ಥಳೀಯ ಸಂಸ್ಥೆಗಳ ಸಾರ್ವತ್ರಿಕ ಚುನಾವಣೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ 2 ವಾರ್ಡುಗಳ ಉಪ ಚುನಾವಣೆಯಲ್ಲಿ ಎಲ್ಲ ಮತದಾರರಿಗೂ ಮತದಾನ ಮಾಡಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕಾಗಿರುವುದರಿಂದ ಹಾಗೂ ಸಾರ್ವಜನಿಕರು ಮುಕ್ತವಾಗಿ ಮತದಾನದಲ್ಲಿ ಪಾಲ್ಗೊಳ್ಳುವಂತೆ ಮಾಡುವ ದೃಷ್ಟಿಯಿಂದ ಮತದಾನದ ಅವಧಿಯನ್ನು ಪೂರ್ವಾಹ್ನ 07.00 ಗಂಟೆಯಿಂದ

ಸಾಯಂಕಾಲ 06.00 ಗಂಟೆಯವರೆಗೆ ವಿಸ್ತರಿಸಿ ಈ ಮೂಲಕ ಆದೇಶಿಸಿದೆ. ಸುರಕ್ಷತಾ ವಿಧಾನವನ್ನು ಅನುಸರಿಸಿಕೊಂಡು ಕೋವಿಡ್ ಸೋಂಕಿತ ಮತದಾರರು ಮತದಾನದ ಕೊನೆಯ ಒಂದು ಗಂಟೆಯಲ್ಲಿ ಸಾಯಂಕಾಲ 05.00 ಗಂಟೆಯಿಂದ 06.00 ಗಂಟೆಯವರೆಗೆ ಮತಗಟ್ಟೆಗೆ ಬಂದು ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಆದೇಶಾನುಸಾರ

( ನಾಗರಾಜು ಎನ್ ಆರ್)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
26/04/2021

ಇವರಿಗೆ,

1. ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ, ಶಿವಮೊಗ್ಗ, ಹಾಸನ, ಬೀದರ್, ಬಳ್ಳಾರಿ, ಕೊಡಗು ಮತ್ತು ಹಾವೇರಿ ಜಿಲ್ಲೆಗಳು.
2. ಎಲ್ಲಾ ಚುನಾವಣಾಧಿಕಾರಿಗಳು, ಆಯಾ ಜಿಲ್ಲಾಧಿಕಾರಿಗಳ ಮುಖಾಂತರ.
3. ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು,ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ, ಶಿವಮೊಗ್ಗ, ಹಾಸನ, ಬೀದರ್, ಬಳ್ಳಾರಿ, ಕೊಡಗು ಮತ್ತು ಹಾವೇರಿ ಜಿಲ್ಲೆಗಳು.

ಪ್ರತಿಯನ್ನು ಈ ಕೆಳಕಂಡವರಿಗೆ ಮಾಹಿತಿಗಾಗಿ ಕಳುಹಿಸಿದೆ.

1. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃಧ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗ.
3. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
4. ವ್ಯವಸ್ಥಾಪಕರು, ಪತ್ರಿಕೆಗಳು/ಶ್ರವಣ/ದೃಶ್ಯ ಮಾಧ್ಯಮಗಳು ಇವರಿಗೆ ಸಾರ್ವಜನಿಕರ ಮಾಹಿತಿಗಾಗಿ ಪ್ರಚಾರ ನೀಡುವಂತೆ ಕೋರಿ.

( ನಾಗರಾಜು ಎನ್ ಆರ್)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
26/04/2021